# ದಿನಾಂಕ: 29–09–2011 ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ನಿರ್ಣಯ

## ವಿಷಯದ ಸಂಖ್ಯೆ : 169/2011–12

ಶ್ರೀ. ಬಿ.ಆರ್.ನಂಜುಂಡಪ್ಪ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

2011–12ನೇ ಸಾಲಿನ ಆಯವ್ಯಯವು ಅನುಮೋದನೆಗಾಗಿ ಸರ್ಕಾರದ ಹಂತದಲ್ಲಿದ್ದು, ಪೂಜ್ಯ ಮಹಾಪೌರರ ವೈದ್ಯಕೀಯ ಪರಿಹಾರ ನಿಧಿ ಲೆಕ್ಕ ಶೀರ್ಷಿಕೆಯಡಿ ಬಡವರಿಗೆ ಮತ್ತು ಹಿಂದುಳಿದವರಿಗೆ ಪೂಜ್ಯ ಮಹಾಪೌರರ ವೈದ್ಯಕೀಯ ಆರ್ಥಿಕ ಸಹಾಯ ನೀಡಲು ಅವಕಾಶವಿದ್ದು, ವೈದ್ಯಕೀಯ ವೆಚ್ಚದ ಪರಿಹಾರ ಕೋರಿ ಅರ್ಜಿಗಳು ಹೆಚ್ಚಾಗಿ ಬರುತ್ತಿದ್ದು, ವೈದ್ಯಕೀಯ ವೆಚ್ಚಗಳಿಗೆ ಧನ ಸಹಾಯವನ್ನು ಮಂಜೂರು ಮಾಡಲು ರೂ.200–00 ಲಕ್ಷಗಳ ಅನುದಾನವನ್ನು (2011–12ನೇ ಸಾಲಿನ ಆಯವ್ಯಯದಲ್ಲಿ ಮೀಸಲಿಡುವ ಮೊತ್ತದಲ್ಲಿ ಕಟಾಯಿಸುವ ಷರತ್ತಿಗೆ ಒಳಪಟ್ಟು) ಪೂಜ್ಯ ಮಹಾಪೌರರ ವೈದ್ಯಕೀಯ ಪರಿಹಾರ ನಿಧಿಗೆ ಬಿಡುಗಡೆ ಮಾಡಲು ಆಯುಕ್ತರು ಕ್ರಮ ಕೈಗೊಳ್ಳುವುದು.

ಶ್ರೀ ಡಿ.ವೆಂಕಟೇಶ್ ಮೂರ್ತಿ ರವರು, ಶ್ರೀ.ಬಿ.ಆರ್.ನಂಜುಂಡಪ್ಪ, ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** 2011–12ನೇ ಸಾಲಿನ ಆಯವ್ಯಯವು ಅನುಮೋದನೆಗಾಗಿ ಸರ್ಕಾರದ ಹಂತದಲ್ಲಿದ್ದು, ಪೂಜ್ಯ ಮಹಾಪೌರರ ವೈದ್ಯಕೀಯ ಪರಿಹಾರ ನಿಧಿ ಲೆಕ್ಕ ಶೀರ್ಷಿಕೆಯಡಿ ಬಡವರಿಗೆ ಮತ್ತು ಹಿಂದುಳಿದವರಿಗೆ ಪೂಜ್ಯ ಮಹಾಪೌರರ ವೈದ್ಯಕೀಯ ಆರ್ಥಿಕ ಸಹಾಯ ನೀಡಲು ಅವಕಾಶವಿದ್ದು, ವೈದ್ಯಕೀಯ ವೆಚ್ಚದ ಪರಿಹಾರ ಕೋರಿ ಅರ್ಜಿಗಳು ಹೆಚ್ಚಾಗಿ ಬರುತ್ತಿದ್ದು, ವೈದ್ಯಕೀಯ ವೆಚ್ಚಗಳಿಗೆ ಧನ ಸಹಾಯವನ್ನು ಮಂಜೂರು ಮಾಡಲು ರೂ.200–00 ಲಕ್ಷಗಳ ಅನುದಾನವನ್ನು (2011–12ನೇ ಸಾಲಿನ ಆಯವ್ಯಯದಲ್ಲಿ ಮೀಸಲಿಡುವ ಮೊತ್ತದಲ್ಲಿ ಕಟಾಯಿಸುವ ಷರತ್ತಿಗೆ ಒಳಪಟ್ಟು) ಪೂಜ್ಯ ಮಹಾಪೌರರ ವೈದ್ಯಕೀಯ ಪರಿಹಾರ ನಿಧಿಗೆ ಬಿಡುಗಡೆ ಮಾಡಲು ಆಯುಕ್ತರು ಕ್ರಮ ಕೈಗೊಳ್ಳುವುದೆಂದು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.".

ಶಾರದಮ್ಮ
(ಶಾರದಮ್ಮ)
ಮಹಾಪೌರರು

# ದಿನಾಂಕ: 29–09–2011 ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಅಭಿನಂದನಾ ನಿರ್ಣಯ

## ವಿಷಯದ ಸಂಖ್ಯೆ : 171/2011–12

ಶ್ರೀ. ಬಿ.ಆರ್.ನಂಜುಂಡಪ್ಪ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಕನ್ನಡದ ಹಿರಿಯ ಕವಿ ಡಾ॥ ಚಂದ್ರಶೇಖರ ಬಿ. ಕಂಬಾರ ರವರಿಗೆ "ಜ್ಞಾನಪೀಠ" ಪ್ರಶಸ್ತಿ ಲಭಿಸಿರುವುದು ಕನ್ನಡ ನಾಡಿಗೆ, ಭಾಷೆಗೆ ಹಾಗೂ ಕನ್ನಡಿಗರಿಗೆ ಸಂದ ಗೌರವವಾಗಿದೆ. ಇದು ಕನ್ನಡ ನಾಡಿಗೆ, ನಮ್ಮ ನಿಮ್ಮೆಲ್ಲರಿಗೆ ಅತ್ಯಂತ ಹೆಮ್ಮೆಯ ಸಂಗತಿಯಾಗಿದೆ. ಕನ್ನಡದ ಹೆಸರಾಂತ ಕವಿಗಳಿಗೆ ಸಂದಿರುವ "ಜ್ಞಾನಪೀಠ" ಪ್ರಶಸ್ತಿಗಳಲ್ಲಿ ಇದು 8ನೆಯದಾಗಿದೆ. ಶ್ರೀಯುತರು ಜನವರಿ 2, 1937ರಂದು ಬೆಳಗಾವಿ ಜಿಲ್ಲೆಯ ಘೋಡಗೇರಿಯಲ್ಲಿ ಜನಿಸಿರುವ ಶ್ರೀಯುತರು ವಿಮರ್ಶಕರಾಗಿ, ಕವಿಗಳಾಗಿ ಕವಿತೆ, ಕಾವ್ಯ, ಕಾದಂಬರಿಗಳನ್ನು ರಚಿಸಿದ್ದು, ಸಾಹಿತ್ಯ, ಜಾನಪದ ಹಾಗೂ ನಾಟಕ ಕ್ಷೇತ್ರಗಳಲ್ಲಿಯೂ ಸಹ ಸೇವೆ ಸಲ್ಲಿಸಿರುತ್ತಾರೆ. ಉತ್ತರ ಕರ್ನಾಟಕದ ಜಾನಪದ ರಂಗಭೂಮಿಯ ಬಗ್ಗೆ ಬರೆದ ಮಹಾ ಪ್ರಬಂಧಕ್ಕೆ ಶ್ರೀಯುತರಿಗೆ ಪಿ.ಹೆಚ್.ಡಿ. ಪದವಿಯು ಲಭಿಸಿದೆ. ಶ್ರೀಯುತರು ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾಗಿ, ಕರ್ನಾಟಕ ನಾಟಕ ಅಕಾಡೆಮಿ, ನವದೆಹಲಿಯ ಸಾಹಿತ್ಯ ಅಕಾಡೆಮಿ, ಸಂಗೀತ ನಾಟಕ ಅಕಾಡೆಮಿಯಲ್ಲೂ ಸಹ ಸೇವೆ ಸಲ್ಲಿಸಿದ್ದು, ಶ್ರೀಯುತರು ಕನ್ನಡ ನಾಡು, ನುಡಿಗಾಗಿ ಸಲ್ಲಿಸಿರುವ ಸೇವೆಗಾಗಿ ವರ್ಧಮಾನ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ, ಮಾಸ್ತಿ ಪ್ರಶಸ್ತಿ, ರಾಜ್ಯ ಜಾನಪದ ಮತ್ತು ಯಕ್ಷಗಾನ ಅಕಾಡೆಮಿ ಪ್ರಶಸ್ತಿ, ಭಾರತ ಸರ್ಕಾರದ ಪದ್ಮಶ್ರೀ ಪ್ರಶಸ್ತಿ, ಕೇಂದ್ರ ಸಾಹಿತ್ಯ ಅಕಾಡೆಮಿ ವತಿಯಿಂದ ಪ್ರಶಸ್ತಿ–ಪುರಸ್ಕಾರಗಳು ದೊರೆತಿರುತ್ತವೆ. ಶ್ರೀಯುತರು ಕರ್ನಾಟಕ ವಿಧಾನ ಪರಿಷತ್ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದು, ಈ ಸಂದರ್ಭದಲ್ಲಿ "ಜ್ಞಾನಪೀಠ" ಪ್ರಶಸ್ತಿ ಪಡೆದ ಹೆಸರಾಂತ, ಖ್ಯಾತ ಕವಿ, ಡಾ॥ ಚಂದ್ರಶೇಖರ ಬಿ. ಕಂಬಾರ ರವರಿಗೆ ಈ ಸಭೆಯು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತದೆ. ಶ್ರೀಯುತರು ಕನ್ನಡ ನಾಡು, ನುಡಿಗೆ ಇನ್ನು ಹೆಚ್ಚಿನ ಸೇವೆ ಸಲ್ಲಿಸಲೆಂದು ಆಶಿಸುತ್ತೇನೆ.

ಶ್ರೀ. ಗಂಗಭೈರಯ್ಯ ರವರು, ಶ್ರೀ.ಬಿ.ಆರ್.ನಂಜುಂಡಪ್ಪ, ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಕನ್ನಡದ ಹಿರಿಯ ಕವಿ ಡಾ॥ ಚಂದ್ರಶೇಖರ ಬಿ. ಕಂಬಾರ ರವರಿಗೆ "ಜ್ಞಾನಪೀಠ" ಪ್ರಶಸ್ತಿ ಲಭಿಸಿರುವುದು ಕನ್ನಡ ನಾಡಿಗೆ, ಭಾಷೆಗೆ ಹಾಗೂ ಕನ್ನಡಿಗರಿಗೆ ಸಂದ ಗೌರವವಾಗಿದೆ. ಇದು ಕನ್ನಡ ನಾಡಿಗೆ, ನಮ್ಮ ನಿಮ್ಮೆಲ್ಲರಿಗೆ ಅತ್ಯಂತ ಹೆಮ್ಮೆಯ ಸಂಗತಿಯಾಗಿದೆ. ಕನ್ನಡದ ಹೆಸರಾಂತ ಕವಿಗಳಿಗೆ ಸಂದಿರುವ "ಜ್ಞಾನಪೀಠ" ಪ್ರಶಸ್ತಿಗಳಲ್ಲಿ ಇದು 8ನೆಯದಾಗಿದೆ.

. . . .2

ಶ್ರೀಯುತರು ಜನವರಿ 2, 1937ರಂದು ಬೆಳಗಾವಿ ಜಿಲ್ಲೆಯ ಘೋಡಗೇರಿಯಲ್ಲಿ ಜನಿಸಿರುವ ಶ್ರೀಯುತರು ವಿಮರ್ಶಕರಾಗಿ, ಕವಿಗಳಾಗಿ ಕವಿತೆ, ಕಾವ್ಯ, ಕಾದಂಬರಿಗಳನ್ನು ರಚಿಸಿದ್ದು, ಸಾಹಿತ್ಯ, ಜಾನಪದ ಹಾಗೂ ನಾಟಕ ಕ್ಷೇತ್ರಗಳಲ್ಲಿಯೂ ಸಹ ಸೇವೆ ಸಲ್ಲಿಸಿರುತ್ತಾರೆ. ಉತ್ತರ ಕರ್ನಾಟಕದ ಜಾನಪದ ರಂಗಭೂಮಿಯ ಬಗ್ಗೆ ಬರೆದ ಮಹಾ ಪ್ರಬಂಧಕ್ಕೆ ಶ್ರೀಯುತರಿಗೆ ಪಿ.ಹೆಚ್.ಡಿ. ಪದವಿಯು ಲಭಿಸಿದೆ. ಶ್ರೀಯುತರು ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾಗಿ, ಕರ್ನಾಟಕ ನಾಟಕ ಅಕಾಡೆಮಿ, ನವದೆಹಲಿಯ ಸಾಹಿತ್ಯ ಅಕಾಡೆಮಿ, ಸಂಗೀತ ನಾಟಕ ಅಕಾಡೆಮಿಯಲ್ಲೂ ಸಹ ಸೇವೆ ಸಲ್ಲಿಸಿದ್ದು, ಶ್ರೀಯುತರು ಕನ್ನಡ ನಾಡು, ನುಡಿಗಾಗಿ ಸಲ್ಲಿಸಿರುವ ಸೇವೆಗಾಗಿ ವರ್ಧಮಾನ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ, ಮಾಸ್ತಿ ಪ್ರಶಸ್ತಿ, ರಾಜ್ಯ ಜಾನಪದ ಮತ್ತು ಯಕ್ಷಗಾನ ಅಕಾಡೆಮಿ ಪ್ರಶಸ್ತಿ, ಭಾರತ ಸರ್ಕಾರದ ಪದ್ಮಶ್ರೀ ಪ್ರಶಸ್ತಿ, ಕೇಂದ್ರ ಸಾಹಿತ್ಯ ಅಕಾಡೆಮಿ ವತಿಯಿಂದ ಪ್ರಶಸ್ತಿ-ಪುರಸ್ಕಾರಗಳು ದೊರೆತಿರುತ್ತವೆ. ಶ್ರೀಯುತರು ಕರ್ನಾಟಕ ವಿಧಾನ ಪರಿಷತ್ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದು, ಈ ಸಂದರ್ಭದಲ್ಲಿ "ಜ್ಞಾನಪೀಠ" ಪ್ರಶಸ್ತಿ ಪಡೆದ ಹೆಸರಾಂತ, ಖ್ಯಾತ ಕವಿ, ಡಾ॥ ಚಂದ್ರಶೇಖರ ಬಿ. ಕಂಬಾರ ರವರಿಗೆ ಈ ಸಭೆಯು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತದೆ. ಶ್ರೀಯುತರು ಕನ್ನಡ ನಾಡು, ನುಡಿಗೆ ಇನ್ನು ಹೆಚ್ಚಿನ ಸೇವೆ ಸಲ್ಲಿಸಲೆಂದು ಆಶಿಸಲಾಯಿತು".

(ಶಾರದಮ್ಮ)
ಮಹಾಪೌರರು

## ದಿನಾಂಕ: 29–09–2011 ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ನಿರ್ಣಯ

**ವಿಷಯದ ಸಂಖ್ಯೆ : 172/2011–12**

ಶ್ರೀ. ಬಿ.ಆರ್.ನಂಜುಂಡಪ್ಪ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಕನ್ನಡದ ಹಿರಿಯ ಕವಿ ಡಾ॥ ಚಂದ್ರಶೇಖರ ಬಿ. ಕಂಬಾರ ರವರಿಗೆ "ಜ್ಞಾನಪೀಠ" ಪ್ರಶಸ್ತಿ ಲಭಿಸಿರುವುದು ಕನ್ನಡ ನಾಡಿಗೆ, ಭಾಷೆಗೆ ಹಾಗೂ ಕನ್ನಡಿಗರಿಗೆ ಸಂದ ಗೌರವವಾಗಿದ್ದು, ಡಾ॥ಚಂದ್ರಶೇಖರ ಬಿ. ಕಂಬಾರ ರವರಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಪೌರ ಸನ್ಮಾನ ಮಾಡುವುದು ಹಾಗೂ ಪೌರ ಸನ್ಮಾನ ನಡೆಯುವ ದಿನದಂದು ಸನ್ಮಾನಿತರಿಗೆ ರೂ.2–00 ಲಕ್ಷಗಳ ಗೌರವಧನ ನೀಡಲು ಆಯುಕ್ತರು ಅಗತ್ಯ ಕ್ರಮ ಕೈಗೊಳ್ಳುವುದು.

ಶ್ರೀ ಡಿ.ವೆಂಕಟೇಶ್ ಮೂರ್ತಿ ರವರು, ಶ್ರೀ.ಬಿ.ಆರ್.ನಂಜುಂಡಪ್ಪ, ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಕನ್ನಡದ ಹಿರಿಯ ಕವಿ ಡಾ॥ ಚಂದ್ರಶೇಖರ ಬಿ. ಕಂಬಾರ ರವರಿಗೆ "ಜ್ಞಾನಪೀಠ" ಪ್ರಶಸ್ತಿ ಲಭಿಸಿರುವುದು ಕನ್ನಡ ನಾಡಿಗೆ, ಭಾಷೆಗೆ ಹಾಗೂ ಕನ್ನಡಿಗರಿಗೆ ಸಂದ ಗೌರವವಾಗಿದ್ದು, ಡಾ॥ಚಂದ್ರಶೇಖರ ಬಿ. ಕಂಬಾರ ರವರಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಪೌರ ಸನ್ಮಾನ ಮಾಡುವುದು ಹಾಗೂ ಪೌರ ಸನ್ಮಾನ ನಡೆಯುವ ದಿನದಂದು ಸನ್ಮಾನಿತರಿಗೆ ರೂ.2–00 ಲಕ್ಷಗಳ ಗೌರವಧನ ನೀಡಲು ಆಯುಕ್ತರು ಅಗತ್ಯ ಕ್ರಮ ಕೈಗೊಳ್ಳುವುದೆಂದು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು".

ಶಾರದಮ್ಮ
(ಶಾರದಮ್ಮ)
ಮಹಾಪೌರರು

# ದಿನಾಂಕ: 29–09–2011 ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ನಿರ್ಣಯ

## ವಿಷಯದ ಸಂಖ್ಯೆ : 173/2011–12

ಶ್ರೀ. ಬಿ.ಆರ್.ನಂಜುಂಡಪ್ಪ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

2011–12ನೇ ಸಾಲಿನ ಆಯವ್ಯಯದಲ್ಲಿ ಕುಡಿಯುವ ನೀರು ಮತ್ತು ಒಳಚರಂಡಿ ಕಾಮಗಾರಿ ವ್ಯವಸ್ಥೆಗೆ ಪ್ರತಿ ವಾರ್ಡಿಗೆ 25 ಲಕ್ಷ ರೂಪಾಯಿಗಳನ್ನು ಮೀಸಲಿಡಲಾಗಿದೆ. ಸದರಿ ಅನುದಾನವನ್ನು ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಿ, ಎಲ್ಲಾ ವಾರ್ಡ್‌ಗಳಲ್ಲಿ ಈ ಅನುದಾನವನ್ನು ಉಪಯೋಗಿಸಿಕೊಳ್ಳಲು ಆಯುಕ್ತರು ಕೂಡಲೇ ಕ್ರಮಕೈಗೊಳ್ಳುವುದು.

ಶ್ರೀ. ಗಂಗಭೈರಯ್ಯ ರವರು, ಶ್ರೀ.ಬಿ.ಆರ್.ನಂಜುಂಡಪ್ಪ, ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.ಪ

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "2011–12ನೇ ಸಾಲಿನ ಆಯವ್ಯಯದಲ್ಲಿ ಕುಡಿಯುವ ನೀರು ಮತ್ತು ಒಳಚರಂಡಿ ಕಾಮಗಾರಿ ವ್ಯವಸ್ಥೆಗೆ ಪ್ರತಿ ವಾರ್ಡಿಗೆ 25 ಲಕ್ಷ ರೂಪಾಯಿಗಳನ್ನು ಮೀಸಲಿಡಲಾಗಿದೆ. ಸದರಿ ಅನುದಾನವನ್ನು ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಿ, ಎಲ್ಲಾ ವಾರ್ಡ್‌ಗಳಲ್ಲಿ ಈ ಅನುದಾನವನ್ನು ಉಪಯೋಗಿಸಿಕೊಳ್ಳಲು ಆಯುಕ್ತರು ಕೂಡಲೇ ಕ್ರಮಕೈಗೊಳ್ಳುವುದೆಂದು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು".

ಶಾರದಮ್ಮ
(ಶಾರದಮ್ಮ)
ಮಹಾಪೌರರು

## ದಿನಾಂಕ:29-09-2011 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

### ವಿಷಯದ ಸಂಖ್ಯೆ : 170/2011-12

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಶ್ರೀನಗರ ವಾರ್ಡ್ ನಂ-156 (ಹಳೆ ವಾರ್ಡ್ ನಂ-140), ಶ್ರೀನಗರ ವ್ಯಾಪ್ತಿಯ ದಾಸರಹಳ್ಳಿ ಮುಖ್ಯರಸ್ತೆ (ಹಾಲಿ ಶ್ರೀನಗರ ಮುಖ್ಯರಸ್ತೆ), 10ನೇ ಮುಖ್ಯರಸ್ತೆಯ ತಿರುವಿನಲ್ಲಿರುವ ಖಾಸಗಿ ಸ್ವತ್ತಿನ ಸಿಟಿಎಸ್ ನಂ-810, ಸ್ವತ್ತಿನ ನಂ-140/26, ಪಿಐಡಿ ನಂ-53-29-26 ರಲ್ಲಿನ (ಮೂಲೆ ನಿವೇಶನ) ಭಾಗಶ: ಸ್ವತ್ತು 59 ಚ.ಅಡಿ (5.50 ಚ.ಮೀ) ಸ್ವತ್ತನ್ನು ರಸ್ತೆ ಅಭಿವೃದ್ಧಿಗಾಗಿ ಭೂಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಬಸವನಗುಡಿ ಉಪ ವಿಭಾಗದ ಕಾರ್ಯಪಾಲಕ ಅಭಿಯಂತರರು ಸಲ್ಲಿಸಲಾದ ಪ್ರಸ್ತಾವನೆಯನ್ನು ಕಾರ್ಯಪಾಲಕ ಅಭಿಯಂತರರು ಬಸವನಗುಡಿ ವಿಭಾಗ ರವರು ಶಿಫಾರಸ್ಸು ಮಾಡಿರುತ್ತಾರೆ.

ಮೇಲ್ಕಂಡ ಸ್ವತ್ತನ್ನು ರಸ್ತೆ ಅಭಿವೃದ್ಧಿಗಾಗಿ ಬೆಂಗಳೂರು ಮಹಾನಗರ ಪಾಲಿಕೆಯು ಯಾವುದೇ ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳದೆ ವಶಪಡಿಸಿಕೊಂಡು, ರಸ್ತೆ ಅಭಿವೃದ್ಧಿ ಪಡಿಸಿರುವುದರ ವಿರುದ್ಧ ಸ್ವತ್ತಿನ ಮಾಲೀಕರಾದ ಡಾ॥ ಎಸ್.ಶೋಭಾರವರು ನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ಮಾನ್ಯ ಉಚ್ಚ ನ್ಯಾಯಾಲಯದ WP.No-8426/2010 ರಲ್ಲಿ ದಿನಾಂಕ:24-06-2011 ರಿಂದ 2 ತಿಂಗಳೊಳಗಾಗಿ ವಾದಿಯ ವಿಚಾರಣೆಯನ್ನು ನಡೆಸಿ ಪ್ರಕರಣವನ್ನು ವಿಲೇವಾರಿಗೊಳಿಸಲು ಆದೇಶಿಸಲಾಗಿದೆ.

ಈ ಪ್ರಕರಣದಲ್ಲಿ ಭೂಸ್ವಾಧೀನ ಪಡಿಸಿಕೊಳ್ಳುವ ಸ್ವತ್ತಿನ ವಿವರ ಈ ಕೆಳಕಂಡಂತೆ ಇರುತ್ತದೆ.

| ಕ್ರ. ಸಂ. | ಸಿ.ಟಿ.ಎಸ್ ಸಂಖ್ಯೆ | ಸ್ವತ್ತಿನ ಸಂಖ್ಯೆ | ಪಿ.ಐ.ಡಿ. ಸಂಖ್ಯೆ | ಖಾತೆದಾರರ/ ಅನುಭವದಾರರ ಹೆಸರು | ಸ್ವತ್ತಿನ ಒಟ್ಟು ವಿಸ್ತೀರ್ಣ (ಚ.ಅ.ಗಳಲ್ಲಿ) | ಭೂಸ್ವಾಧೀನ ಪ್ರಸ್ತಾಪಿತ ವಿಸ್ತೀರ್ಣ (ಚ.ಅ.ಗಳಲ್ಲಿ) | ಷರಾ |
|---|---|---|---|---|---|---|---|
| 1 | 810 | 140/26 | 53-29-26 | ಡಾ॥ ಎಸ್.ಶೋಭಾ | 1753.75 | 59.00 | |

ಮೇಲ್ಕಂಡಂತೆ, 1894ರ ಭೂಸ್ವಾಧೀನ ಕಾಯ್ದೆಯನ್ವಯ ಸ್ವಾಧೀನಪಡಿಸಿಕೊಳ್ಳಲಾಗುತ್ತಿರುವ ಸ್ವತ್ತು ಬಿ.ಬಿ.ಎಂ.ಪಿ ವ್ಯಾಪ್ತಿಯ ಅಭಿವೃದ್ಧಿ ಹೊಂದಿದ ಪ್ರದೇಶದಲ್ಲಿರುವುದರಿಂದ, ಕೇಂದ್ರೀಯ ಮೌಲ್ಯಮಾಪನ ಸಮಿತಿಯ ದಿನಾಂಕ:17-04-2007ರ ಸ್ಥಿರಾಸ್ತಿಗಳ ಮಾರುಕಟ್ಟೆ ಬೆಲೆಯ ಮಾರ್ಗಸೂಚಿ ದರದನ್ವಯ ಚದರ ಅಡಿಗೆ ರೂ.1,300/- ಗಳಂತೆ ನಿಗಧಿಪಡಿಸಿ, ಪಾವತಿಸಬೇಕಾದ ಪರಿಹಾರ ಹಾಗೂ ಇತರೆ ವೆಚ್ಚಗಳನ್ನು ಈ ಕೆಳಗಿನಂತೆ ಲೆಕ್ಕಾಚಾರ ಮಾಡಲಾಗಿದೆ.

**"ಅ"-ಭೂ ಪರಿಹಾರ ವೆಚ್ಚ**

| ಕ್ರ.ಸಂ. | ವಿವರಣೆ | ಮೊಬಲಗು (ರೂ.ಗಳಲ್ಲಿ) |
|---|---|---|
| 01 | ಚ.ಅಡಿ ಒಂದಕ್ಕೆ ರೂ.1,300/- ರಂತೆ 59 ಚ.ಅಡಿ ನಿವೇಶನದ ಮೌಲ್ಯ ರೂ.76,700+ಮೂಲೆ ನಿವೇಶನವಾದ್ದರಿಂದ ನಿವೇಶನದ ದರದ ಶೇಖಡಾ 10 ರಷ್ಟು ರೂ. 7,670 | 84,370/- |
| 02 | 1894 ರ ಭೂಸ್ವಾಧೀನ ಕಾಯ್ದೆಯ ಕಲಂ 23(1)(ಎ) ರ ಅನ್ವಯ ಮಾರುಕಟ್ಟೆ ಬೆಲೆಯ ಮೇಲೆ ಶೇಕಡಾ 12 ರಂತೆ ಹೆಚ್ಚುವರಿ ಮಾರುಕಟ್ಟೆ ಬೆಲೆ (ಒಂದು ವರ್ಷಕ್ಕೆ) | 10,124/- |
| 03 | ಈ ಮೊಬಲಗಿಗೆ 1894ರ ಭೂಸ್ವಾಧೀನ ಕಾಯ್ದೆಯ ಕಲಂ 23(2) ರ ಅನ್ವಯ ಶೇಕಡಾ 30 ರಂತೆ ಶಾಸನಬದ್ಧ ಭತ್ಯೆ | 25,311/- |
| | ಒಟ್ಟು (1+2+3) | **1,19,805/-** |
| | | |

"ಆ"-ಇತರೆ ವೆಚ್ಚ

| | | |
|---|---|---|
| 04 | ಸಿಬ್ಬಂದಿ ವೆಚ್ಚ ಶೇಕಡಾ 10 ರಷ್ಟು | ಕೈಬಿಟ್ಟಿದೆ |
| 05 | ಆಡಿಟ್ ವೆಚ್ಚ ಶೇಕಡಾ 1 ರಷ್ಟು | ಕೈಬಿಟ್ಟಿದೆ |
| 06 | ಪ್ರಕಟಣಾ ವೆಚ್ಚ (ಅಂದಾಜು) | 1,00,000/- |
| | (ಅ+ಆ) ಒಟ್ಟು | **2,19,805/-** |

**ಷರಾ:** ದಿನಾಂಕ:05-09-1963 ರ ಸರ್ಕಾರದ ಅಧಿಸೂಚನೆ ಸಂಖ್ಯೆ:FD 126 RFC 60, ರಂತೆ ಯಾವುದೇ ಸ್ಥಳೀಯ ಸಂಸ್ಥೆಗೆ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಲು ಭೂಸ್ವಾಧೀನಾಧಿಕಾರಿಯ ನೇಮಕವಾಗಿದ್ದು, ಸದರಿ ಕಛೇರಿಯ ಸಿಬ್ಬಂದಿ ವೆಚ್ಚವನ್ನು ಆ ಸ್ಥಳೀಯ ಸಂಸ್ಥೆಯೇ ಭರಿಸುತ್ತಿದ್ದಲ್ಲಿ, ಮೇಲಿನ ಕ್ರಮ ಸಂಖ್ಯೆ 4 ಮತ್ತು 5 ರಲ್ಲಿನ ವೆಚ್ಚಗಳನ್ನು ವಿಧಿಸುವ ಅವಶ್ಯಕತೆ ಇಲ್ಲವೆಂಬ ಆದೇಶವಿರುವುದರಿಂದ, ಈ ಎರಡೂ ವೆಚ್ಚಗಳನ್ನು ಒಟ್ಟು ಭೂಸ್ವಾಧೀನ ಪರಿಹಾರ ಲೆಕ್ಕಚಾರದಿಂದ ಕೈಬಿಡಲಾಗಿದೆ.

**(ಎರಡು ಲಕ್ಷದ ಹತ್ತೊಂಭತ್ತು ಸಾವಿರದ ಎಂಟು ನೂರ ಐದು ರೂ.ಗಳು ಮಾತ್ರ)**

ಮೇಲ್ಕಂಡ ಕಂಡಿಕೆಗಳಲ್ಲಿ ವಿವರಿಸಿರುವಂತೆ, ಮೇಲೆ ನಮೂದಿಸಿರುವ ಸ್ವತ್ತನ್ನು ದಿನಾಂಕ:24-06-2011ರ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಭೂಸ್ವಾಧೀನಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗಿದ್ದು, ನ್ಯಾಯಾಲಯವು ನೀಡಿರುವ 2 ತಿಂಗಳ ಸಮಯ ದಿನಾಂಕ:24-08-2011 ರಂದೇ ಮುಕ್ತಾಯಗೊಂಡಿರುತ್ತದೆ. ಇದು ಮಾನ್ಯ ಉಚ್ಚ ನ್ಯಾಯಾಲಯದ ಆದೇಶವಾಗಿರುವುದರಿಂದ ಹೆಚ್ಚಿನ ವಿಳಂಬಕ್ಕೆ ಅವಕಾಶ ನೀಡದೇ ಈ ಸ್ವತ್ತನ್ನು ಭೂಸ್ವಾಧೀನ ಕಾಯ್ದೆ 1894 ರನ್ವಯ ಭೂಸ್ವಾಧೀನಪಡಿಸಿಕೊಳ್ಳಲು ಹಾಗೂ ಇದಕ್ಕೆ ತಗಲುವ ಭೂ ಪರಿಹಾರ ಮತ್ತು ಇತರೆ ವೆಚ್ಚಗಳು ಸೇರಿ ಒಟ್ಟು ರೂ.2,08,914/- (ಎರಡು ಲಕ್ಷದ ಎಂಟು ಸಾವಿರದ ಒಂಭೈನೂರ ಹದಿನಾಲ್ಕು ರೂ.ಗಳು ಮಾತ್ರ) ಗಳನ್ನು ಪಾಲಿಕೆಯ 2011-12ನೇ ಸಾಲಿನ ಆಯವ್ಯಯದಲ್ಲಿ ಮೀಸಲಿರಿಸಿರುವ ಅನುದಾನದಿಂದ ಭರಿಸುವ ಬಗ್ಗೆ ಶೀಘ್ರ ತಿರ್ಮಾನ ಕೈಗೊಳ್ಳಬೇಕಾಗಿದ್ದು, ಈ ಪ್ರಸ್ತಾವನೆಯನ್ನು ಪಾಲಿಕೆಯ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ ಹಾಗೂ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಗಳ ಮುಂದೆ ಮಂಡಿಸಿದ್ದಲ್ಲಿ, ವಿಳಂಬವಾಗುವ ಸಾಧ್ಯತೆ ಇದ್ದು, ಅರ್ಜಿದಾರರು ಉಚ್ಚ ನ್ಯಾಯಾಲಯದ ಮುಂದೆ ನ್ಯಾಯಾಂಗ ನಿಂದನಾ ಮೊಕದ್ದಮೆ ದಾಖಲಿಸಿದಲ್ಲಿ ವ್ಯತಿರಿಕ್ತ ಪರಣಾಮಗಳಾಗುವ ಸಂಭವವಿರುತ್ತದೆ. ಆದ್ದರಿಂದ, ಈ ಭೂಸ್ವಾಧೀನ ಪ್ರಸ್ತಾವನೆಯನ್ನು ನೇರವಾಗಿ ಪಾಲಿಕೆಯ ಸಾಮಾನ್ಯ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:22-09-2011 ರ ಟಿಪ್ಪಣಿ.

ಶ್ರೀ ಬಿ.ಆರ್.ನಂಜುಂಡಪ್ಪ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ: 156 (ಹಳೆ ಸಂಖ್ಯೆ:140) ಶ್ರೀನಗರ ವ್ಯಾಪ್ತಿಯ ದಾಸರಹಳ್ಳಿ ಮುಖ್ಯ ರಸ್ತೆ (ಹಾಲಿ ಶ್ರೀನಗರ ಮುಖ್ಯ ರಸ್ತೆ) 10ನೇ ಮುಖ್ಯ ರಸ್ತೆಯ ತಿರುವಿನಲ್ಲಿರುವ ಖಾಸಗಿ ಸ್ವತ್ತಿನ ಸಿಟಿಎಸ್ ನಂ.810, ಸ್ವತ್ತಿನ ಸಂಖ್ಯೆ: 140/26, ರಲ್ಲಿನ ಭಾಗಶ: ಸ್ವತ್ತು

59 ಚ.ಅ. (5.50 ಚ.ಮೀ) ಸ್ವತ್ತನ್ನು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ರಸ್ತೆ ಅಭಿವೃದ್ಧಿಗಾಗಿ ಭೂ ಸ್ವಾಧೀನಪಡಿಸಿಕೊಳ್ಳುವ ಸಂಬಂಧ ದಿನಾಂಕ:22-09-2011 ರಂದು ಆಯುಕ್ತರವರು ಮಂಡಿಸಿರುವ ಟಿಪ್ಪಣಿಯಂತೆ, ಭೂ ಸ್ವಾಧೀನ ಪ್ರಕ್ರಿಯೆಗೆ ತಗಲುವ ವೆಚ್ಚ ರೂ.2,08,914/-ಗಳನ್ನು ನಗರ ಪಾಲಿಕೆಯ 2011-12ನೇ ಸಾಲಿನ ಆಯವ್ಯಯದಲ್ಲಿ ಮೀಸಲಿರಿಸಿರುವ ಅನುದಾನದಿಂದ ಭರಿಸಿ, ಭೂ ಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳಲು ಆಯುಕ್ತರು ಕೂಡಲೇ ಕ್ರಮಕೈಗೊಳ್ಳುವುದು.

ಶ್ರೀ ಡಿ.ವೆಂಕಟೇಶ್ ಮೂರ್ತಿ ರವರು ಶ್ರೀ.ಬಿ.ಆರ್.ನಂಜುಂಡಪ್ಪ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ: 156 (ಹಳೆ ಸಂಖ್ಯೆ:140) ಶ್ರೀನಗರ ವ್ಯಾಪ್ತಿಯ ದಾಸರಹಳ್ಳಿ ಮುಖ್ಯ ರಸ್ತೆ (ಹಾಲಿ ಶ್ರೀನಗರ ಮುಖ್ಯ ರಸ್ತೆ) 10ನೇ ಮುಖ್ಯ ರಸ್ತೆಯ ತಿರುವಿನಲ್ಲಿರುವ ಖಾಸಗಿ ಸ್ವತ್ತಿನ ಸಿಟಿಎಸ್ ನಂ.810, ಸ್ವತ್ತಿನ ಸಂಖ್ಯೆ: 140/26, ರಲ್ಲಿನ ಭಾಗಶ: ಸ್ವತ್ತು 59 ಚ.ಅ. (5.50 ಚ.ಮೀ) ಸ್ವತ್ತನ್ನು ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ರಸ್ತೆ ಅಭಿವೃದ್ಧಿಗಾಗಿ ಭೂ ಸ್ವಾಧೀನಪಡಿಸಿಕೊಳ್ಳುವ ಸಂಬಂಧ ದಿನಾಂಕ:22-09-2011 ರಂದು ಆಯುಕ್ತರವರು ಮಂಡಿಸಿರುವ ಟಿಪ್ಪಣಿಯಂತೆ, ಭೂ ಸ್ವಾಧೀನ ಪ್ರಕ್ರಿಯೆಗೆ ತಗಲುವ ವೆಚ್ಚ ರೂ.2,08,914/-ಗಳನ್ನು ನಗರ ಪಾಲಿಕೆಯ 2011-12ನೇ ಸಾಲಿನ ಆಯವ್ಯಯದಲ್ಲಿ ಮೀಸಲಿರಿಸಿರುವ ಅನುದಾನದಿಂದ ಭರಿಸಿ, ಭೂ ಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳಲು ಆಯುಕ್ತರು ಕೂಡಲೇ ಕ್ರಮಕೈಗೊಳ್ಳುವುದೆಂದು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು".

ಶಾರದಮ್ಮ

(ಶಾರದಮ್ಮ)

ಮಹಾಪೌರರು